155ನ್ಯ 20:72 ✓
1806/25
155-72-8

**ವಿಧಾನ ಪರಿಷತ್ ಸದಸ್ಯರಾದ ಮಾನ್ಯ ಶ್ರೀ ಪುಟ್ಟಣ್ಣ ಇವರು ನಿಯಮ 330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:-**

**ರಾಜ್ಯದ ಅನುದಾನಿತ ಶಾಲೆಗಳಲ್ಲಿ ನಿವೃತ್ತಿ ಮರಣ ರಾಜೀನಾಮೆ ಇತ್ಯಾದಿ ಕಾರಣಗಳಿಂದ ಹಲವಾರು ಹುದ್ದೆಗಳು ಖಾಲಿ ಆಗಿವೆ. ಸದರಿ ಖಾಲಿ ಹುದ್ದೆಗಳನ್ನು ತುಂಬಲು 2015ರವರೆಗೆ ಮಾತ್ರ ಅನುಮತಿ ನೀಡಲಾಗಿದೆ. ಆದರೆ ತದ ನಂತರ ನೂರಾರು ಹುದ್ದೆಗಳು ಖಾಲಿ ಆಗಿದ್ದು ಸದರಿ ಹುದ್ದೆಗಳನ್ನು ತುಂಬಲು ಅನುಮತಿ ನೀಡದೆ ಇರುವುದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತ ದೃಷ್ಟಿಯಿಂದ ಅನುದಾನಿತ ಶಾಲಾ ಕಾಲೇಜುಗಳಲ್ಲಿ ನಿವೃತ್ತಿ ಮರಣ ರಾಜೀನಾಮೆಯಿಂದ 2021ನೇ ಸಾಲಿನವರೆಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗಿದೆ, ಆದರೆ ಒಳ ಮೀಸಲಾತಿಯ ಕಾರಣ ನೀಡಿ ಸದರಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡದೆ ಇರುವ ವಿಷಯದ ಬಗ್ಗೆ ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಖಾಸಗಿ ಅನುದಾನಿತ ಪ್ರೌಢಶಾಲೆ/ ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ: 31/12/2015 ರವರೆಗೆ ವಿವಿಧ ಕಾರಣಗಳಿಂದ ತೆರವಾದ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್.ಇ.ಪಿ 2017 ಬೆಂಗಳೂರು ದಿನಾಂಕ:25/09/2018ರಲ್ಲಿ ಅನುಮತಿಸಲಾಗಿದೆ.

ಖಾಸಗಿ ಅನುದಾನಿತ ಪ್ರೌಢಶಾಲೆ/ ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:01/01/2016 ರಿಂದ 31/12/2020 ರವರೆಗೆ ವಿವಿಧ ಕಾರಣಗಳಿಂದ ತೆರವಾದ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಪಿ 396 ಎಸ್‌ಇಎಸ್ 2021 ದಿನಾಂಕ:07/08/2024 ರಲ್ಲಿ ಅನುಮತಿಸಲಾಗಿದೆ. ಸದರಿ ಆದೇಶದ ಷರತ್ತಿನಲ್ಲಿ ಆನ್‌ಲೈನ್ ಮೂಲಕ ನೇಮಕಾತಿ ಅನುಮೋದನೆಗೆ ಕ್ರಮವಹಿಸಲು ತಿಳಿಸಲಾಗಿದೆ. ಅದರಂತೆ ಅನ್‌ಲೈನ್ ಮೂಲಕ ನೇಮಕಾತಿ ಅನುಮೋದನೆಗೆ ತಂತ್ರಾಂಶ ಅಭಿವೃದ್ಧಿ ಪಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024 ದಿನಾಂಕ:25/11/2024ರ ಸುತ್ತೋಲೆಯಲ್ಲಿ ದಿನಾಂಕ:28/10/2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿರುತ್ತದೆ.

ಜಂಟಿ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, : SWD/489/SLP/2024 ರಲ್ಲಿ ಸರ್ಕಾರದ ಜಂಟಿ ದಿನಾಂಕ: 18/02/2025 ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರು ಆಯ್ಕೆ ಪ್ರಾಧಿಕಾರಿಗಳು/ನೇಮಕಾತಿ ಪ್ರಾಧಿಕಾರಿಗಳು ಪರಿಶಿಷ್ಟಜಾತಿಯ ಒಳ ಮೀಸಲಾತಿ/ಉಪ ವರ್ಗೀಕರಣ ಪ್ರಕ್ರಿಯೆ ಜಾರಿಯಾದ ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಳ್ಳಬಹುದು, ಆದರೆ ಒಳ ಮೀಸಲಾತಿ ಬಗ್ಗೆ ಸರ್ಕಾರದ ಆದೇಶವಾಗುವವರೆಗೆ ರಿಕ್ತ ಸ್ಥಾನಗಳನ್ನು ತುಂಬುವ ಬಗ್ಗೆ ಯಾವುದೇ ಅಧಿಸೂಚನೆಯನ್ನು ಹೊರಡಿಸಬಾರದು ಮತ್ತು ನೇಮಕಾತಿಯನ್ನು ಕೈಗೊಳ್ಳತಕ್ಕದ್ದಲ್ಲ ಎಂದು ತಿಳಿಸಿರುತ್ತಾರೆ.

**ಸಂಖ್ಯೆ: ಇಪಿ 153 ಎಸ್‌ಇಎಸ್ 2025**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**